ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂ: ಉಕೃನಿ(ಕೃಯಾಂ&ಸೂನೀ)/LAQ-1968/2024-25

ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ: 20.07.2024

ರವರಿಗೆ,

ಸರ್ಕಾರದ ಕಾರ್ಯದರ್ಶಿಗಳು,
ಕೃಷಿ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ. ಮಂಜು ಎ (ಅರಕಲಗೂಡು) ಇವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1968 ಕ್ಕೆ ಉತ್ತರಗಳನ್ನು ಸಲ್ಲಿಸುವ ಕುರಿತು.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ. ಮಂಜು ಎ (ಅರಕಲಗೂಡು) ಇವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1968 ಕ್ಕೆ ಉತ್ತರಗಳನ್ನು ಸಿದ್ದಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

ಕೃಷಿ ನಿರ್ದೇಶಕರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	ಎಲ್.ಎ.ಕ್ಯೂ.1968
ಸದಸ್ಯರ ಹೆಸರು	ಶ್ರೀ. ಮಂಜು ಎ (ಅರಕಲಗೂಡು)
ಉತ್ತರಿಸಬೇಕಾದ ದಿನಾಂಕ	24/07/2024
ಉತ್ತರಿಸುವ ಸಚಿವರು	ಮಾನ್ಯ ಕೃಷಿ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯಲ್ಲಿ ಯಂತ್ರಧಾರೆ ಯಾಂತ್ರೀಕರಣ ಯೋಜನೆಯಡಿಯಲ್ಲಿ ಪವರ್ ವೇಡರ್, ರೋಟೋವೇಟರ್, ಮಿನಿ ಟ್ರ್ಯಾಕ್ಟರ್, ಮೇವು ಕತ್ತರಿಸುವ ಯಂತ್ರ ಸೇರಿದಂತೆ ಇತರೆ ಯಂತ್ರಗಳನ್ನು ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗದ ರೈತರಿಗೆ ಸಹಾಯಧನದ ಅಡಿಯಲ್ಲಿ ಅರಕಲಗೂಡು ವಿಧಾನಸಭಾ ಕ್ಷೇತ್ರಕ್ಕೆ ವಿತರಿಸಿದ ಸಂಖ್ಯೆ ಎಷ್ಟು; (ಸಂಪೂರ್ಣ ವರದಿ ನೀಡುವುದು)	ಕಳೆದ ಮೂರು ವರ್ಷಗಳಲ್ಲಿ ಅರಕಲಗೂಡು ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಇಲಾಖೆಯ ಕೃಷಿ ಯಾಂತ್ರೀಕರಣ ಯೋಜನೆಯಡಿ ಪರಿಶಿಷ್ಟ ಜಾತಿಯ 567 ರೈತರು ಹಾಗೂ ಪರಿಶಿಷ್ಟ ವರ್ಗದ 164 ರೈತರು ಪಡೆದ ಯಂತ್ರೋಪಕರಣಗಳಿಗೆ ಸಹಾಯಧನವನ್ನು ಒದಗಿಸಲಾಗಿದೆ. ವರ್ಷವಾರು ಮತ್ತು ವರ್ಗವಾರು ವಿವರ ಕೆಳಕಂಡಂತಿದೆ:

ವರ್ಷ	ಪರಿಶಿಷ್ಟ ಜಾತಿ ರೈತರ ಸಂಖ್ಯೆ	ಪರಿಶಿಷ್ಟ ವರ್ಗದ ರೈತರ ಸಂಖ್ಯೆ
2021-22	268	72
2022-23	185	53
2023-24	114	39
ಒಟ್ಟು	**567**	**164**

ಫಲಾನುಭವಿಗಳ ಸಂಪೂರ್ಣ ವಿವರಗಳನ್ನು **ಅನುಬಂಧ-1** ರಲ್ಲಿನ ಸಿಡಿ ರೂಪದಲ್ಲಿ ಲಗತ್ತಿಸಿದೆ.

ಕ್ರ.ಸಂ.	ಪ್ರಶ್ನೆ	ಉತ್ತರ
ಆ)	ಕಳೆದ ಮೂರು ವರ್ಷಗಳಲ್ಲಿ ಅರಕಲಗೂಡು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಸೂಕ್ಷ್ಮ ಹನಿ ನೀರಾವರಿ ಯೋಜನೆಯಡಿ ಸಹಾಯ ಧನ ಪಡೆದ ರೈತರ ಸಂಖ್ಯೆ ಎಷ್ಟು;(ವಿವರ ನೀಡುವುದು)	ಕಳೆದ ಮೂರು ವರ್ಷಗಳಲ್ಲಿ ಅರಕಲಗೂಡು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ 10300 ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳಿಗೆ ಸಹಾಯಧನವನ್ನು ಒದಗಿಸಲಾಗಿದೆ. ವರ್ಷವಾರು ವಿವರ ಕೆಳಕಂಡಂತಿದೆ.

ವರ್ಷ	ರೈತರ ಸಂಖ್ಯೆ
2021-22	3010
2022-23	4363
2023-24	2927
ಒಟ್ಟು	**10300**

ಫಲಾನುಭವಿಗಳ ಸಂಪೂರ್ಣ ವಿವರಗಳನ್ನು **ಅನುಬಂಧ-2** ರಲ್ಲಿನ ಸಿಡಿ ರೂಪದಲ್ಲಿ ಲಗತ್ತಿಸಿದೆ.

ಕ್ರ.ಸಂ.	ಪ್ರಶ್ನೆ	ಉತ್ತರ
ಇ)	ಅರಕಲಗೂಡು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಒಟ್ಟು ರೈತರ ಸಂಖ್ಯೆ ಎಷ್ಟು; ಈ ಸೌಲಭ್ಯವನ್ನು ಪಡೆಯಲು ತಮ್ಮ ಹೆಸರನ್ನು ಪ್ರೂಟ್ಸ್/ಹಸಿರು ತಂತ್ರಾಂಶದಲ್ಲಿ ನೊಂದಣಿ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು?	ಅರಕಲಗೂಡು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಒಟ್ಟು ರೈತರ ಸಂಖ್ಯೆ 81,716. ಈ ಸೌಲಭ್ಯವನ್ನು ಪಡೆಯಲು 74716 ರೈತರು ಫ್ರೂಟ್ಸ್/ಹಸಿರು ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡಿರುತ್ತಾರೆ.

ಕೃಷಿ ನಿರ್ದೇಶಕರು